ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**(485)292**
ಸದಸ್ಯರ ಹೆಸರು	:	**ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಬಾಲ್ಕಿ)**
ಉತ್ತರಿಸುವ ಸಚಿವರು	:	**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು**

ಅ) ಭಾಲ್ಕಿ ವಿಧಾನಸಭಾ ಕ್ಷೇತ್ರದಲ್ಲಿರುವ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ಹಾಗೂ ಇವುಗಳಿಗೆ ಮಂಜೂರಾಗಿರುವ ಶಿಕ್ಷಕರು ಹಾಗೂ ಇತರ ಹುದ್ದೆಗಳ ಸಂಖ್ಯೆ ಎಷ್ಟು; (ಗ್ರಾಮವಾರು ವಿವರಗಳನ್ನು ಒದಗಿಸುವುದು)

- ಭಾಲ್ಕಿ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 26 ಸರ್ಕಾರಿ ಪ್ರೌಢಶಾಲೆಗಳಿವೆ. ಗ್ರಾಮವಾರು ವಿವರಗಳನ್ನು ಅನುಬಂಧದಲ್ಲಿ ತಿಳಿಸಲಾಗಿದೆ.
- ಪ್ರತಿ ಶಾಲೆಗೆ ಮುಖ್ಯ ಶಿಕ್ಷಕರು ಒಳಗೊಂಡಂತೆ ಒಟ್ಟು 8 ಶಿಕ್ಷಕರು ಹಾಗೂ ಇತರೆ 1 ದ್ವಿತೀಯ ದರ್ಜೆ ಸಹಾಯಕ ಹುದ್ದೆ ಮತ್ತು 1 ಗ್ರೂಪ್-ಡಿ ಹುದ್ದೆ ಮಂಜೂರಾಗಿರುತ್ತದೆ.

ಆ) ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಮುಂದಿರುವ ಕ್ರಮಗಳೇನು;

- ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಧಕ್ಕೆಯಾಗದಂತೆ ಶಿಕ್ಷಕರನ್ನು ನಿಯೋಜಿಸಲಾಗಿದೆ ಹಾಗೂ ಖಾಲಿ ಹುದ್ದೆಗಳನ್ನು ಬಡ್ತಿ ಹಾಗೂ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.
- ಬೋಧಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ 500 ಪ್ರಥಮ ದರ್ಜೆ ಸಹಾಯಕರು ಮತ್ತು 1242 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ತುಂಬಲು ಕರ್ನಾಟಕ ಲೋಕಸೇವಾ ಆಯೋಗ್ ಮುಖಾಂತರ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ. ಇದಲ್ಲದೆ ಅನುಕಂಪದ ಆಧಾರದ ಮೇರೆಗೆ ಸಹ ಭರ್ತಿ ಮಾಡಿಕೊಳ್ಳಲಾಗುತ್ತಿದೆ.
- ಖಾಲಿ ಇರುವ ಡಿ ದರ್ಜೆ ಹುದ್ದೆಗಳು, ಬೆರಳಚ್ಚುಗಾರರ ಹುದ್ದೆಗಳು ಹಾಗೂ ವಾಹನ ಚಾಲಕರ ಹುದ್ದೆಗಳನ್ನು ಬಾಹ್ಯ ಮೂಲಗಳಿಂದ ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ.

ಇ) ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಈ ಮತಕ್ಷೇತ್ರದಲ್ಲಿ ಹೊಸದಾಗಿ ಯಾವ ಯಾವ ಗ್ರಾಮಗಳಲ್ಲಿ ಪ್ರೌಢಶಾಲೆಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ;

ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಬೇಡಿಕೆ ಪ್ರಸ್ತಾವನೆಗಳನ್ನು ಪರಿಶೀಲಿಸಲಾಗುವುದು.

ಅನುಬಂಧ

(ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ, ವಿಧಾನಸಭಾ ಸದಸ್ಯರು ಇವರು ಮಂಡಿಸಿರುವ ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ: 485ಗೆ ಉತ್ತರ)

1) ಬಾಳೂರ
2) ಬೀರಿ (ಬಿ)
3) ಬಾಲ್ಕಿ
4) ಬಾತಂದ್ರಾ
5) ದಾಡಗಿ
6) ಬನ್ನೂರ.ಎಸ್
7) ಡೊಣಗಾಪುರ
8) ಹಲಬರ್ಗಾ
9) ಹಾಲಳ್ಳಿ ಕೆ
10) ಜಾಂತಿ
11) ಕಾಕನಾಳ
12) ಕಣಜಿ
13) ಖಟಕ ಚಿಂಚೊಳ್ಳಿ
14) ಕೋಣ ಮೇಳಕುಂದ
15) ಲಾಧಾ
16) ಲಖನಗಾಂವ
17) ಮೆಹಕರ
18) ನಿಟ್ಟೂರ ಬಿ
19) ಸಾಯಗಾಂವ
20) ವರವಟ್ಟಿ ಬಿ
21) ಕೋಸಂ
22) ಮಳಚಾಪುರ
23) ವರಾಸಿಯಾಡ
24) ಮದಕಟ್ಟಿ
25) ತಂವಾಡ
26) ತುಂಗಾವ ಹೆಚ್